ಅಧ್ಯಕ್ಷರು :— ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಉತ್ತರವನ್ನು ಮಂಡಿಸಲಾಯಿತು.

4) ಕಾರ್ಯದರ್ಶಿಯವರ ವರದಿ

ಶ್ರೀ ಯಾಕುಬ್ ಹುಸೇನ್ (ಕಾರ್ಯದರ್ಶಿ) :— ಅಧ್ಯಕ್ಷರೇ ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಷ್ಟ್ರಾಧ್ಯಕ್ಷರಿಂದ ಮತ್ತು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆದಿರುವಂತಹ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ರಾಷ್ಟ್ರಪತಿಯವರಿಂದ ಅಥವಾ ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿ

ಕ್ರಮ ಸಂಖ್ಯೆ	ವಿಧೇಯಕದ ಹೆಸರು	ಒಪ್ಪಿಗೆಯನ್ನು ಪಡೆದ ದಿನಾಂಕ	ಒಪ್ಪಿಗೆಯನ್ನು ನೀಡಿದವರು
1	2	3	4
1	ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕ. ೧೯೯೮	೨೧-೧೧-೧೯೯೮	ರಾಜ್ಯಪಾಲರು
2.	ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, ೧೯೯೮	೨೪-೧೧-೧೯೯೮	ರಾಜ್ಯಪಾಲರು
3.	ಹೈದರಾಬಾದ್. ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ವಿಧೇಯಕ. ೧೯೯೮	೩೦-೧೧-೧೯೯೮	ರಾಜ್ಯಪಾಲರು
4.	ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ. ೧೯೯೫	೧೨-೧೨-೧೯೯೮	ರಾಷ್ಟ್ರಪತಿಗಳು
5.	ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕ, ೧೯೯೭	೧೯-೧೨-೧೯೯೮	ರಾಷ್ಟ್ರಪತಿಗಳು

5. ಸಭೆಯ ಮುಂದಿಡಲಾದ ಕಾಗದಪತ್ರಗಳ ಪಟ್ಟಿ.

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿ) (ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿ) ರವರಪರವಾಗಿ :—

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ 8(3)ನೇ ಪ್ರಕರಣದ ಮೇರೆಗೆ.